ಕೃಷಿ ವಿಶ್ವ ವಿದ್ಯಾನಿಲಯ

ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)

ಜಿ.ಕೆ.ವಿ.ಕೆ., ಬೆಂಗಳೂರು–560065


# * ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 28.02.2020

ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

(ದಿನಾಂಕ 29-02-2020 - 04-03-2020 ವರೆಗೆ)

| | 29.02.20 | 01.03.20 | 02.03.20 | 03.03.20 | 04.03.20 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ.) | 31 | 31 | 32 | 33 | 33 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 20 | 20 | 20 | 21 | 22 |
| ಮೋಡ ( ಪ್ರಮಾಣ) | 5 | 4 | 3 | 3 | 4 |
| ಅರ್ದ್ರತೆ ೭.೨೦ ಬೆ (ಶೇ) | 75 | 75 | 73 | 74 | 71 |
| ಅರ್ದ್ರತೆ ೨.೨೦ ಮ (ಶೇ) | 62 | 61 | 61 | 58 | 58 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 5 | 6 | 5 | 5 |
| ಗಾಳಿಯ ದಿಕ್ಕು ( ಡಿಗ್ರಿ) | 120 | 112 | 103 | 122 | 124 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆ0ಯಾಗುವ ಸಂಭವ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ **31.0-33.0$^{o}$ C** ಮತ್ತು ಕನಿಷ್ಠ **20.0-22.0$^{o}$C** ಇರುವ ಸಾಧ್ಯತೆ ಇದೆ. ಬೆಳೆಗಿನ ಆರ್ದ್ರತೆ ಪ್ರಮಾಣ ಶೇ **71-75 %** ಇದ್ದು ಮಧ್ಯಾಹ್ನ **58-62 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **5-6** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

## ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಕಳೆದ ಮೂರು ತಿಂಗಳಿನಿಂದ ಒಣ ಹವೆ ಇರುವುದರಿಂದ ತೋಟಗಾರಿಕೆ ಬೆಳೆಗಳಲ್ಲಿ ಗೆದ್ದಲು ಹುಳುಗಳ ಭಾದೆಯು ಹೆಚ್ಚಾಗಿದ್ದು ಇದರ ಹತೋಟಿಗೆ ಆಲ್ಡರಿನ್ ಕೀಟನಾಶಕದಿಂದ ಉಪಚರಿಸಿ ಗೆದ್ದಲು ಹುಳುಗಳನ್ನು ನಿಯಂತ್ರಿಸಿ.<br>➢ ಮಾವು, ಹಲಸು, ಹುಣಸೆ, ಸಪೋಟ, ಬೆಟ್ಟದನೆಲ್ಲಿ ಹಾಗು ಅರಣ್ಯ ಬೆಳೆಗಳಾದ ಹೆಬ್ಬೇವು, ಬೇವು ಮುಂತಾದ ಮರಗಿಡಗಳಲ್ಲಿ ಗೆದ್ದಲು ಹುಳುಗಳ ಭಾದೆಯು ಹೆಚ್ಚಾಗಿದ್ದು ಇದರ ಹತೋಟಿಗೆ ಆಲ್ಡರಿನ್ ಕೀಟನಾಶಕದಿಂದ ಉಪಚರಿಸಿ ಗೆದ್ದಲು ಹುಳುಗಳನ್ನು ನಿಯಂತ್ರಿಸಿ.<br>➢ ಕೊಯ್ಲು ಮಾಡಿದ ರಾಗಿ, ಜೋಳ ಇನ್ನಿತರ ಧಾನ್ಯಗಳನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ, ಒಕ್ಕಣೆ ಮಾಡಿ ಶುಚಿಗೊಳಿಸಿ ಚೀಲಗಳಲ್ಲಿ ಶೇಖರಣೆ ಮಾಡುವುದು.<br>➢ ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು.<br>➢ ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.೮ ಮತ್ತು ತರಕಾರಿ ಬೀಜಗಳು ಶೇ.5 ರಿಂದ 6 ರಷ್ಟಿರಬೇಕು.ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು. |
| ತೊಗರಿ | ➢ ತೊಗರಿ ಕಟಾವನ್ನು ಮುಂದುವರಿಸಿ ಮತ್ತು ಕಟಾವಾದ ತೊಗರಿಯನ್ನು ಬಿಸಿಲಿನಲ್ಲಿ ಒಣಗಿಸಿ ಸಿಪ್ಪೆಯಿಂದ ಬೇರ್ಪಡಿಸಿ ಒಕ್ಕಣೆ ಮಾಡಿ ಚೀಲದಲ್ಲಿ ಶೇಖರಿಸಿ. |
| ಮಾವು | ➢ ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>➢ ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ. |

| | ಹೈನುಗಾರಿಕೆ |
|---|---|
| **ಪಶುಸಂಗೋಪನೆ** | ➢ ಕಟಾವಾದ ಜೋಳವನ್ನು ಉಪಯೋಗಿಸಿಕೊಂಡು ರಸಮೇವನ್ನು ತಯಾರಿಸಿ ರಾಸುಗಳಿಗೆ ಪೌಷ್ಟಿಕವಾದಂತಹ ಮೇವನ್ನು ಒದಗಿಸಬಹುದು.<br>➢ ಸಾಕಷ್ಟು ನೀರು ಸುಲಭವಾಗಿ ದೊರೆಯುವಂತ ಸ್ಥಳವನ್ನು ಕೊಟ್ಟಿಗೆ ನಿರ್ಮಾಣಕ್ಕೆ ಆಯ್ಕೆ ಮಡಿಕೊಳ್ಳಬೇಕು. ಒಂದು ಹಸುವಿನ ನಿರ್ವಹಣೆಗೆ ಕುಡಿಯಲು ಸುಮಾರು 30-40 ಲೀ ನೀರು ಪ್ರತಿ ದಿನಕ್ಕೆ ( ಒಂದು ಲೀಟರ್ ಹಾಲಿನ ಉತ್ಪಾದನೆಗೆ 4 ಲೀ. ನೀರು)<br>➢ ಸಾಧ್ಯವಾದ ಮಟ್ಟಿಗೆ ಆಯ್ಕೆ ಮಾಡುವ ಸ್ಥಳದಲ್ಲಿ ಹೆಚ್ಚು ಮರಗಳಿರಬೇಕು. ಬಿಸಿಗಾಳಿಯ ಬೀಸುವಿಕೆಯಿಂದ ರಾಸುಗಳ ಮೇಲಾಗುವ ಅಡ್ಡ ಪರಿಣಾಮಗಳನ್ನು ಮರಗಳು ಕಡಿಮೆ ಮಾಡುತ್ತವೆ. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**